GPO - KPS -

ಕರ್ನಾಟಕ ಸರ್ಕಾರದ ನಡವಳಿಗಳು

ವಿಷಯ : 2019–20ನೇ ಸಾಲಿನಲ್ಲಿ ಹೊಸದಾಗಿ 100 ಕರ್ನಾಟಕ ಪಬ್ಲಿಕ್ ಶಾಲೆಗಳನ್ನು ಪ್ರಾರಂಭಿಸುವ ಬಗ್ಗೆ.

ಓದಲಾಗಿದೆ :
1. ಸರ್ಕಾರಿ ಆದೇಶ ಸಂಖ್ಯೆ: ಇಡಿ 04 ಯೋಸಕ 2017, ದಿನಾಂಕ:05.01.2018.
2. 2018–19ನೇ ಸಾಲಿನ (ಫೆಬ್ರವರಿ) ಆಯವ್ಯಯ ಭಾಷಣದ ಕಂಡಿಕೆ: **111**
3. 2019–20ನೇ ಸಾಲಿ ಆಯವ್ಯಯ ಭಾಷಣದ ಕಂಡಿಕೆ: 116
4. ದಿನಾಂಕ:15.03.2019 ರಂದು ಪ್ರಧಾನ ಕಾರ್ಯದರ್ಶಿಗಳ ಅಧ್ಯಕ್ಷತೆಯಲ್ಲಿ ನಡೆದ ಕರ್ನಾಟಕ ಪಬ್ಲಿಕ್ ಶಾಲೆಗಳು, ಆಂಗ್ಲ ಮಾಧ್ಯಮ ಶಾಲೆಗಳು, ಹಾಗೂ ಪೂರ್ವ ಪ್ರಾಥಮಿಕ ಶಾಲೆಗಳ ಸ್ಥಾಪನೆ ಕುರಿತ ಸಭೆಯ ನಡವಳಿ

ಪ್ರಸ್ತಾವನೆ:

ಕರ್ನಾಟಕ ಸರ್ಕಾರವು "ಪ್ರತಿ ಮಗುವೂ ಶಾಲೆಯಲ್ಲಿ ಮತ್ತು ಉತ್ತಮ ಕಲಿಕೆಯೊಂದಿಗೆ" ಎಂಬ ಘೋಷ ನೀತಿಯನ್ನು ಅಳವಡಿಸಿಕೊಂಡಿದ್ದು, ಪ್ರತಿ ಮಗುವಿಗೂ ಶಿಕ್ಷಣ ಹಕ್ಕು ಕಾಯ್ದೆ ಅನ್ವಯ ಗುಣಮಟ್ಟದ ಶಿಕ್ಷಣ ನೀಡುವ ಜವಾಬ್ದಾರಿಯನ್ನು ಹೊಂದಿರುತ್ತದೆ. ವಿದ್ಯಾರ್ಥಿಗಳು ಉತ್ತಮವಾಗಿ ಕಲಿಯಲು ಸಹಕರಿಸುವಂತೆ ಶಾಲೆಗಳಲ್ಲಿ ಬೋಧನಾ ಪದ್ಧತಿಯನ್ನು ಸುಧಾರಿಸಲು ಕ್ರಮ ತೆಗೆದುಕೊಳ್ಳಬೇಕಾಗಿದೆ. ಈ ದೂರದೃಷ್ಟಿಯ ಹಿನ್ನೆಲೆಯಲ್ಲಿ, 2017–18ನೇ ಸಾಲಿನ ಆಯವ್ಯಯ ಘೋಷಣೆಯಂತೆ, ಶಿಕ್ಷಕರು ಮತ್ತು ಇತರ ಸಂಪನ್ಮೂಲಗಳ ಬಳಕೆಯ ಸಮರ್ಪಕತೆಯನ್ನು ಸುಧಾರಿಸಲು, ಒಂದೇ ಭೌಗೋಳಿಕ ಸ್ಥಳಗಳಲ್ಲಿ ಅಸ್ತಿತ್ವದಲ್ಲಿರುವ ಶಾಲೆಗಳನ್ನು ಆಡಳಿತಾತ್ಮಕ, ಶೈಕ್ಷಣಿಕ ಮತ್ತು ಕ್ರಿಯಾತ್ಮಕ ಸಂಯೋಜನೆಯೊಂದಿಗೆ ಒಟ್ಟುಗೂಡಿಸಿ, ತಾಲ್ಲೂಕಿಗೆ ಒಂದರಂತೆ 176 ಕರ್ನಾಟಕ ಪಬ್ಲಿಕ್ ಶಾಲೆಗಳನ್ನು ಪ್ರಾರಂಭಿಸಲು ಮೇಲೆ ಓದಲಾದ ಕ್ರಮಾಂಕ (1) ರ ಆದೇಶದಲ್ಲಿ ಅನುಮೋದನೆ ನೀಡಲಾಗಿರುತ್ತದೆ.

ಮೇಲೆ ಓದಲಾದ ಕ್ರಮಾಂಕ (2) ರ 2018–19ನೇ ಸಾಲಿನ (ಫೆಬ್ರವರಿ) ಆಯವ್ಯಯ ಭಾಷಣದಲ್ಲಿ ಸನ್ಮಾನ್ಯ ಮುಖ್ಯ ಮಂತ್ರಿಯವರು ಒಂದೇ ಸೂರಿನಡಿ ವಿದ್ಯಾಭ್ಯಾಸ ಕಲ್ಪಿಸಿ ಶಿಕ್ಷಣದ ಗುಣಮಟ್ಟ ಉತ್ತಮಪಡಿಸಲು ಪ್ರಸಕ್ತ ಸಾಲಿನಲ್ಲಿ 100 ಸಂಯೋಜಿತ 'ಕರ್ನಾಟಕ ಪಬ್ಲಿಕ್ ಶಾಲೆ'ಗಳನ್ನು ಪ್ರಾರಂಭಿಸಲಾಗುವುದು. ಎಂದು ಘೋಷಿಸಿರುತ್ತಾರೆ.

ಮೇಲೆ ಓದಲಾದ ಕ್ರಮಾಂಕ (3) ರ 2019–20ನೇ ಸಾಲಿನ ಆಯವ್ಯಯ ಭಾಷಣದ ದಲ್ಲಿ ಸನ್ಮಾನ್ಯ ಮುಖ್ಯ ಮಂತ್ರಿಯವರು "ಮುಂದಿನ 4 ವರ್ಷಗಳಲ್ಲಿ ಒಂದು ಸಾವಿರ ಕರ್ನಾಟಕ ಪಬ್ಲಿಕ್ ಶಾಲೆಗಳನ್ನು ಹೋಬಳಿ ಕೇಂದ್ರಸ್ಥಾನಗಳಲ್ಲಿ ಸ್ಥಾಪಿಸಲಾಗುವುದು. ಸದರಿ ಶಾಲೆಗಳಲ್ಲಿ ಪೂರ್ವ ಪ್ರಾಥಮಿಕ ತರಗತಿಗಳಿಂದ 12ನೇ ತರಗತಿಗಳವರೆಗೆ ಶಿಕ್ಷಣವನ್ನು ಒಂದೇ ಸೂರಿನಡಿ ಒದಗಿಸಲಾಗುವುದು. ಈ ಶಾಲೆಗಳಿಗೆ ಕೇಂದ್ರಿಯ ವಿದ್ಯಾಲಯದ ಮಾದರಿಯಲ್ಲಿ ಪ್ರತ್ಯೇಕ ಸಂಘಟನೆ ಹಾಗೂ ಮಾರ್ಗಸೂಚಿಗಳನ್ನು ನಿಗದಿಪಡಿಸಲಾಗುವುದು" ಎಂದು ಘೋಷಿಸಿರುತ್ತಾರೆ.

...2

ಮೇಲೆ ಓದಲಾದ ಕ್ರಮಾಂಕ (3) ರ ನಡವಳಿಯಂತೆ, ಕರ್ನಾಟಕ ಪಬ್ಲಿಕ್ ಶಾಲೆಗಳನ್ನು ಪ್ರಾರಂಭಿಸುವ ಕುರಿತು ಸರ್ಕಾರದ ಪ್ರಧಾನ ಕಾರ್ಯದರ್ಶಿಗಳು, ಪ್ರಾಥಮಿಕ ಮತ್ತು ಪ್ರೌಢ ಶಿಕ್ಷಣ ಇಲಾಖೆ, ಇವರ ಅಧ್ಯಕ್ಷತೆಯಲ್ಲಿ ನಡೆದ ಸಭೆಯಲ್ಲಿ, 2019-20ನೇ ಸಾಲಿನಲ್ಲಿ ಈಗಾಗಲೇ ಪ್ರಾರಂಭಿಸಿರುವ 176 ಕರ್ನಾಟಕ ಪಬ್ಲಿಕ್ ಶಾಲೆಗಳ ಜೊತೆಗೆ, ಪ್ರತಿ ವಿಧಾನಸಭಾ ಕ್ಷೇತ್ರಕ್ಕೆ ಕನಿಷ್ಠ ಒಂದು ಕರ್ನಾಟಕ ಪಬ್ಲಿಕ್ ಶಾಲೆ ಬರುವಂತೆ ಹೊಸದಾಗಿ 100 ಕರ್ನಾಟಕ ಪಬ್ಲಿಕ್ ಶಾಲೆಗಳನ್ನು ಹಾಗೂ 2019-20ನೇ ಸಾಲಿನ ಆಯವ್ಯಯ ಘೋಷಣೆಯಂತೆ ಮುಂಬರುವ ವರ್ಷಗಳಲ್ಲಿ ಹೋಬಳಿಗೆ ಒಂದರಂತೆ ಕರ್ನಾಟಕ ಪಬ್ಲಿಕ್ ಶಾಲೆಗಳನ್ನು ಪ್ರಾರಂಭಿಸುವ ಬಗ್ಗೆ ತೀರ್ಮಾನಿಸಲಾಗಿರುತ್ತದೆ.
ಮೇಲ್ಕಂಡ ಪ್ರಸ್ತಾವನೆಯಲ್ಲಿನ ಅಂಶಗಳನ್ನು ಕೂಲಂಕಶವಾಗಿ ಪರಿಶೀಲಿಸಿ, ಈ ಕೆಳಕಂಡಂತೆ ಆದೇಶಿಸಿದೆ

ಸರ್ಕಾರದ ಆದೇಶ ಸಂಖ್ಯೆ: ಇಡಿ 230 ಯೋಸಕ 2018, ಬೆಂಗಳೂರು,

ದಿನಾಂಕ:18.05.2019.

ಪ್ರಸ್ತಾವನೆಯಲ್ಲಿ ವಿವರಿಸಿರುವ ಅಂಶಗಳ ಹಿನ್ನೆಲೆಯಲ್ಲಿ, ಈಗಾಗಲೇ ಸ್ಥಾಪಿಸಲಾಗಿರುವ 176 ಕರ್ನಾಟಕ ಪಬ್ಲಿಕ್ ಶಾಲೆಗಳ ಜೊತೆಗೆ, 2019-20ನೇ ಸಾಲಿಗೆ ಇದರೊಂದಿಗೆ ಲಗತ್ತಿಸಿರುವ **ಅನುಬಂಧ**ದಂತೆ 100 ಹೊಸ 'ಕರ್ನಾಟಕ ಪಬ್ಲಿಕ್ ಶಾಲೆ'ಗಳನ್ನು ಪ್ರಾರಂಭಿಸಲು ಅನುಮೋದನೆ ನೀಡಿ ಆದೇಶಿಸಿದೆ.

ಅಸ್ತಿತ್ವದಲ್ಲಿರುವ ಶಾಲೆಗಳ ಕ್ರೋಢೀಕರಣ:

i. ಅಸ್ತಿತ್ವದಲ್ಲಿರುವ, ಒಂದೇ ಆವರಣದಲ್ಲಿ ಕಾರ್ಯನಿರ್ವಹಿಸುತ್ತಿರುವ ಹಾಗೂ ಅದೇ ಗ್ರಾಮ/ಪಟ್ಟಣ/ನಗರದಲ್ಲಿ, ಆದರೆ ಸಮೀಪದಲ್ಲಿ ಕಾರ್ಯನಿರ್ವಹಿಸುತ್ತಿರುವ ಪ್ರಾಥಮಿಕ ಶಾಲೆ, ಪ್ರೌಢಶಾಲೆ ಮತ್ತು ಪದವಿ ಪೂರ್ವ ಕಾಲೇಜುಗಳನ್ನು ಕ್ರೋಢೀಕರಿಸಿ, ಅನುಬಂಧದ ಕ್ರಮ ಸಂಖ್ಯೆ: 1 ರಿಂದ 78 ರಂತೆ ಒಟ್ಟು ಎಪ್ಪತ್ತೆಂಟು (78) ಕರ್ನಾಟಕ ಪಬ್ಲಿಕ್ ಶಾಲೆಗಳನ್ನು ಪ್ರಾರಂಭಿಸತಕ್ಕದ್ದು.

ii. ಅಸ್ತಿತ್ವದಲ್ಲಿರುವ, ಒಂದೇ ಆವರಣದಲ್ಲಿ ಕಾರ್ಯನಿರ್ವಹಿಸುತ್ತಿರುವ ಹಾಗೂ ಅದೇ ಗ್ರಾಮ/ಪಟ್ಟಣ/ನಗರದಲ್ಲಿ ಅಥವಾ ಸಮೀಪದಲ್ಲಿ ಕಾರ್ಯನಿರ್ವಹಿಸುತ್ತಿರುವ ಪ್ರಾಥಮಿಕ ಶಾಲೆ ಮತ್ತು ಪ್ರೌಢಶಾಲೆಗಳನ್ನು ಕ್ರೋಢೀಕರಿಸಿ, ಅನುಬಂಧದ ಕ್ರಮ ಸಂಖ್ಯೆ: 79 ರಿಂದ 98 ರಂತೆ ಒಟ್ಟು ಇಪ್ಪತ್ತು (20) ಕರ್ನಾಟಕ ಪಬ್ಲಿಕ್ ಶಾಲೆಗಳನ್ನು ಪ್ರಾರಂಭಿಸತಕ್ಕದ್ದು.

iii. ಅಸ್ತಿತ್ವದಲ್ಲಿರುವ, ಒಂದೇ ಆವರಣದೊಳಗೆ ಕಾರ್ಯನಿರ್ವಹಿಸುತ್ತಿರುವ ಹಿರಿಯ ಪ್ರಾಥಮಿಕ ಶಾಲೆಗಳಲ್ಲಿ ಅನುಬಂಧದ ಕ್ರಮ ಸಂಖ್ಯೆ: 99 ಮತ್ತು 100 ರಂತೆ ಎರಡು (02) ಕರ್ನಾಟಕ ಪಬ್ಲಿಕ್ ಶಾಲೆಗಳನ್ನು ಪ್ರಾರಂಭಿಸುವುದು.

ಆಡಳಿತಾತ್ಮಕ ಕ್ರಮಗಳು:

1. ಕರ್ನಾಟಕ ಪಬ್ಲಿಕ್ ಶಾಲೆಗಳ ಮೇಲುಸ್ತುವಾರಿಯನ್ನು ವಹಿಸಲು ರಾಜ್ಯ ಯೋಜನಾ ನಿರ್ದೇಶಕರು, ಸಮಗ್ರ ಶಿಕ್ಷಣ ಕರ್ನಾಟಕ, ಬೆಂಗಳೂರು ಇವರು 'ಕರ್ನಾಟಕ ಪಬ್ಲಿಕ್ ಶಾಲೆ' ಯೋಜನೆಯ ನೋಡಲ್ ಅಧಿಕಾರಿಯಾಗಿರುತ್ತಾರೆ.

2. ನಿರ್ದೇಶಕರು, ಪ್ರಾಥಮಿಕ ಶಿಕ್ಷಣ, ನಿರ್ದೇಶಕರು ಪ್ರೌಢ ಶಿಕ್ಷಣ ಮತ್ತು ನಿರ್ದೇಶಕರು ಪದವಿ ಪೂರ್ವ ಶಿಕ್ಷಣ ಇವರು ಕಾರ್ಯಕ್ರಮದ ಅನುಷ್ಠಾನಾಧಿಕಾರಿಗಳಾಗಿರುತ್ತಾರೆ.

...3

3. ನಿರ್ದೇಶಕರು, ರಾಜ್ಯ ಶಿಕ್ಷಣ ಸಂಶೋಧನೆ ಮತ್ತು ತರಬೇತಿ ನಿರ್ದೇಶನಾಲಯ, ಬೆಂಗಳೂರು ಇವರು 'ಕರ್ನಾಟಕ ಪಬ್ಲಿಕ್ ಶಾಲೆ'ಗಳಿಗೆ ಶೈಕ್ಷಣಿಕ ಸಮಗ್ರ ಯೋಜನೆಯನ್ನು ರೂಪಿಸಿ ಸೂಕ್ತ ಮಾರ್ಗದರ್ಶನ ನೀಡತಕ್ಕದ್ದು.

4. ಜಿಲ್ಲಾ ಶಿಕ್ಷಣ ಮತ್ತು ತರಬೇತಿ ಸಂಸ್ಥೆಗಳಲ್ಲಿ ಕಾರ್ಯನಿರ್ವಹಿಸುತ್ತಿರುವ ಉಪನ್ಯಾಸಕರನ್ನು ಪ್ರತಿಯೊಂದು ಕರ್ನಾಟಕ ಪಬ್ಲಿಕ್ ಶಾಲೆಗಳಿಗೆ ಸಮನ್ವಯಾಧಿಕಾರಿಗಳನ್ನಾಗಿ ಸಂಬಂಧಿಸಿದ ಪ್ರಾಧಿಕಾರಿಯು ನೇಮಕ ಮಾಡತಕ್ಕದ್ದು.

5. ಪ್ರೌಢಶಾಲೆ ಮತ್ತು ಪದವಿ ಪೂರ್ವ ಕಾಲೇಜುಗಳು ಇಲ್ಲದೇ ಇರುವ ಕಡೆ, ಇವುಗಳನ್ನು ಸ್ಥಾಪಿಸಲು ಉಪನಿರ್ದೇಶಕರು (ಆಡಳಿತ), ಸಾರ್ವಜನಿಕ ಶಿಕ್ಷಣ ಇಲಾಖೆ ಮತ್ತು ಉಪನಿರ್ದೇಶಕರು, ಪದವಿ ಪೂರ್ವ ಶಿಕ್ಷಣ ನಿರ್ದೇಶನಾಲಯ ಇವರು, ಪ್ರಸ್ತಾವನೆಗಳನ್ನು ಸರ್ಕಾರಕ್ಕೆ ಸಲ್ಲಿಸಿ, ಅನುಮೋದನೆ ಪಡೆಯತಕ್ಕದ್ದು.

6. ಕರ್ನಾಟಕ ಪಬ್ಲಿಕ್ ಶಾಲೆಗಳಿಗೆ ಸಿಬ್ಬಂದಿಗಳ ಮಾದರಿ ಸೃಜನೆ, ನೇಮಕಾತಿ, ವರ್ಗಾವಣೆಗಳಿಗೆ ಸಂಬಂಧಿಸಿದ ನಿಯಮಗಳನ್ನು ರೂಪಿಸುವ ಪ್ರಸ್ತಾವನೆಯನ್ನು ಸರ್ಕಾರಕ್ಕೆ ಸಲ್ಲಿಸಿ ಅನುಮೋದನೆ ಪಡೆಯತಕ್ಕದ್ದು.

7. ಕರ್ನಾಟಕ ಪಬ್ಲಿಕ್ ಶಾಲೆಗಳಲ್ಲಿ ವಿದ್ಯಾರ್ಥಿಗಳ ದಾಖಲಾತಿ ಹೆಚ್ಚಾದಲ್ಲಿ ಕೊರತೆಯುಂಟಾಗುವ ಹೆಚ್ಚುವರಿ ಶಿಕ್ಷಕರು, ಹೆಚ್ಚುವರಿ ಕೊಠಡಿಗಳು ಹಾಗೂ ಮೂಲಭೂತ ಸೌಲಭ್ಯಗಳಿಗೆ ಅಗತ್ಯವಾದ ಅನುದಾನದ ಬೇಡಿಕೆಯ ಪ್ರಸ್ತಾವನೆಯನ್ನು ಸಕಾಲದಲ್ಲಿ ಇಲಾಖಾ ಮುಖ್ಯಸ್ಥರಿಗೆ ಸಲ್ಲಿಸತಕ್ಕದ್ದು.

8. ಕರ್ನಾಟಕ ಪಬ್ಲಿಕ್ ಶಾಲೆಗಳಿಗೆ ವ್ಯಾಪ್ತಿ ಪ್ರದೇಶವನ್ನು ನಿಗದಿಪಡಿಸಿ, ದೂರ ಇರುವ ಜನವಸತಿಗಳು ಅಥವಾ ಗ್ರಾಮ, ಗುಡ್ಡಗಾಡು ಪ್ರದೇಶಗಳು, ಮಲೆನಾಡು ಪ್ರದೇಶಗಳಲ್ಲಿ ಎಲ್ಲಿ ವಿರಳ ಸಾರಿಗೆ ಅಥವಾ ಸಾರಿಗೆ ಸೌಲಭ್ಯ ದೊರಕದ ಪ್ರದೇಶಗಳಲ್ಲಿ ಇರುವ ಮಕ್ಕಳನ್ನು ಗುರುತಿಸಿ ಸಾರಿಗೆ ಸೌಲಭ್ಯ ವ್ಯವಸ್ಥೆಯನ್ನು ಒದಗಿಸತಕ್ಕದ್ದು. ಇದಕ್ಕೆ ಪ್ರತ್ಯೇಕವಾದ ಪ್ರಸ್ತಾವನೆಯನ್ನು ಇಲಾಖಾ ಮುಖ್ಯಸ್ಥರಿಗೆ ಸಲ್ಲಿಸತಕ್ಕದ್ದು.

9. ಎಲ್ಲಾ ಕರ್ನಾಟಕ ಪಬ್ಲಿಕ್ ಶಾಲೆಗಳ ಕಟ್ಟಡದ ಬಣ್ಣ ಏಕರೂಪವಾಗಿರಬೇಕು ಹಾಗೂ ಆಕರ್ಷಣೀಯವಾಗಿರಬೇಕು ಈ ಬಗ್ಗೆ ಸೂಕ್ತ ಮಾರ್ಗಸೂಚಿಗಳನ್ನು ಇಲಾಖಾ ಮುಖ್ಯಸ್ಥರು ಹೊರಡಿಸತಕ್ಕದ್ದು.

10. ಕರ್ನಾಟಕ ಪಬ್ಲಿಕ್ ಶಾಲೆಗಳಲ್ಲಿ ಪದವಿ ಪೂರ್ವ ತರಗತಿಗಳ ವಿದ್ಯಾರ್ಥಿಗಳೂ ವ್ಯಾಸಂಗ ಮಾಡುವುದರಿಂದ ಆ ವಿದ್ಯಾರ್ಥಿಗಳಿಗೂ ಸಹ ಮಧ್ಯಾಹ್ನದ ಬಿಸಿಯೂಟ ಯೋಜನೆಯನ್ನು ವಿಸ್ತರಿಸಲು ಸೂಕ್ತ ಪ್ರಸ್ತಾವನೆಯನ್ನು ಇಲಾಖಾ ಮುಖ್ಯಸ್ಥರು ಸರ್ಕಾರಕ್ಕೆ ಸಲ್ಲಿಸತಕ್ಕದ್ದು.

11. ಕರ್ನಾಟಕ ಪಬ್ಲಿಕ್ ಶಾಲೆಯ ಬಲವರ್ಧನೆಗಾಗಿ ಸ್ಥಳೀಯ ಸಂಘ ಸಂಸ್ಥೆಗಳು, ದಾನಿಗಳು, ಖಾಸಗಿ ಸಂಸ್ಥೆಗಳ ಸಾಮಾಜಿಕ ಹೊಣೆಗಾರಿಕೆ ನಿಧಿ (ಸಿ.ಎಸ್.ಆರ್) ಮೊದಲಾದ ಸಂಪನ್ಮೂಲಗಳ ಸಹಕಾರವನ್ನು ಪಡೆದುಕೊಳ್ಳತಕ್ಕದ್ದು.

12. ಕರ್ನಾಟಕ ಪಬ್ಲಿಕ್ ಶಾಲೆಗಳ ನಿರ್ವಹಣೆಗಾಗಿ ಶಾಲಾ ಹಂತದಲ್ಲಿ ಕಾರ್ಯನಿರ್ವಾಹಕ ಸಮಿತಿಯನ್ನು ರಚಿಸತಕ್ಕದ್ದು.

13. ಕರ್ನಾಟಕ ಪಬ್ಲಿಕ್ ಶಾಲೆಗಳ ಉಸ್ತುವಾರಿಗಾಗಿ ಜಿಲ್ಲಾ ಹಂತದಲ್ಲಿ ಜಿಲ್ಲಾಧಿಕಾರಿಗಳ ಅಧ್ಯಕ್ಷತೆಯಲ್ಲಿ ಆಡಳಿತಾತ್ಮಕ ಸಮಿತಿಯನ್ನು ರಚಿಸತಕ್ಕದ್ದು.

...4

14. ಕರ್ನಾಟಕ ಪಬ್ಲಿಕ್ ಶಾಲೆಗಳ ಉಸ್ತುವಾರಿಗಾಗಿ ಆಯಾ ವಿಧಾನ ಸಭಾ ವ್ಯಾಪ್ತಿಯಲ್ಲಿ ಬರುವ ವಿಧಾನ ಸಭಾ ಸದಸ್ಯರ ಅಧ್ಯಕ್ಷತೆಯಲ್ಲಿ ಉಸ್ತುವಾರಿ ಸಮಿತಿಯನ್ನು ರಚನೆ ಮಾಡತಕ್ಕದ್ದು.

15. ಕರ್ನಾಟಕ ಪಬ್ಲಿಕ್ ಶಾಲೆಗಳ ಪ್ರಾಂಶುಪಾಲರು, ಉಪ ಪ್ರಾಂಶುಪಾಲರು, ಜಿಲ್ಲಾ/ವಲಯ ಅನುಷ್ಠಾನಾಧಿಕಾರಿಗಳಿಗೆ ವಿಶೇಷ ತರಬೇತಿಯನ್ನು ರಾಜ್ಯ ಶೈಕ್ಷಣಿಕ ನಾಯಕತ್ವ ನಿರ್ವಹಣಾ ಸಂಸ್ಥೆ (SISLEP) ಸಹಯೋಗದಲ್ಲಿ ನೀಡತಕ್ಕದ್ದು.

16. ಕರ್ನಾಟಕ ಪಬ್ಲಿಕ್ ಶಾಲೆಗಳ ಶಿಕ್ಷಕರಿಗೆ ವಿಶೇಷ ತರಬೇತಿಯನ್ನು ಜಿಲ್ಲಾ ಶಿಕ್ಷಣ ತರಬೇತಿ ಸಂಸ್ಥೆ (ಡಯಟ್) ಸಹಯೋಗದಲ್ಲಿ ನೀಡತಕ್ಕದ್ದು.

17. ಕರ್ನಾಟಕ ಪಬ್ಲಿಕ್ ಶಾಲೆಗಳಲ್ಲಿ ವೃತ್ತಿ ಶಿಕ್ಷಣಕ್ಕೆ ಹೆಚ್ಚು ಒತ್ತು ನೀಡಲು ಸ್ಥಳೀಯ ಐ.ಟಿ.ಐ, ಪಾಲಿಟೆಕ್ನಿಕ್, ಇಂಜಿನಿಯರಿಂಗ್ ಕಾಲೇಜು ಹಾಗೂ ಇತರೆ ಸರ್ಕಾರೇತರ ಸಂಸ್ಥೆಗಳ ಸಹಯೋಗದೊಂದಿಗೆ ರಾಷ್ಟ್ರೀಯ ವೃತ್ತಿ ಕೌಶಲ್ಯ ಚೌಕಟ್ಟು (ಓಖಿಕಿಈ) ಯೋಜನೆಯನ್ನು ಜಾರಿಗೊಳಿಸತಕ್ಕದ್ದು.

18. ಪೂರ್ವ ಪ್ರಾಥಮಿಕ ತರಗತಿ ಹಾಗೂ ಇಂಗ್ಲೀಷ್ ಮಾಧ್ಯಮ ತರಗತಿಗಳನ್ನು ಪ್ರಾಯೋಗಿಕವಾಗಿ ಪ್ರಾರಂಭಿಸುವ ಸರ್ಕಾರದ ಮಹತ್ವಾಕಾಂಕ್ಷಿ ಯೋಜನೆಗಳನ್ನು ಕರ್ನಾಟಕ ಪಬ್ಲಿಕ್ ಶಾಲೆಗಳಲ್ಲಿ ಪರಿಣಾಮಕಾರಿಯಾಗಿ ಅನುಷ್ಠಾನಗೊಳಿಸತಕ್ಕದ್ದು.

19. ಕರ್ನಾಟಕ ಪಬ್ಲಿಕ್ ಶಾಲೆಗಳನ್ನು ಉತೃಷ್ಠ ದರ್ಜೆಯ ಸೌಲಭ್ಯಗಳನ್ನೊಳಗೊಂಡ ಮಾದರಿ ಶಾಲೆಯನ್ನಾಗಿ ರೂಪಿಸತಕ್ಕದ್ದು.

20. ಕರ್ನಾಟಕ ಪಬ್ಲಿಕ್ ಶಾಲೆಗಳಲ್ಲಿ ಶೈಕ್ಷಣಿಕ ಮತ್ತು ಆಡಳಿತಾತ್ಮಕ ವಿಷಯಗಳ ಏಕರೂಪತೆಯನ್ನು ತರುವ ನಿಟ್ಟಿನಲ್ಲಿ ಆಯುಕ್ತರು, ಸಾರ್ವಜನಿಕ ಶಿಕ್ಷಣ ಇಲಾಖೆ, ಬೆಂಗಳೂರು ಇವರು ಸಮಗ್ರವಾದ ಮಾರ್ಗಸೂಚಿಯನ್ನು ಹೊರಡಿಸತಕ್ಕದ್ದು.

ಮೇಲೆ ಓದಲಾದ ಕ್ರಮಾಂಕ(1) ರ ಆದೇಶದಲ್ಲಿ ನಿಗದಿಪಡಿಸಿರುವ ಷರತ್ತು ಹಾಗೂ ನಿಯಮಗಳನ್ನು ಹೊಸದಾಗಿ 100 ಕರ್ನಾಟಕ ಪಬ್ಲಿಕ್ ಶಾಲೆಗಳನ್ನು ಪ್ರಾರಂಭಿಸುವ ಸಮಯದಲ್ಲಿಯೂ ಯಥಾವತ್ತಾಗಿ ಪಾಲಿಸತಕ್ಕದ್ದು.

ಈ ಆದೇಶವನ್ನು ಆರ್ಥಿಕ ಇಲಾಖೆಯ ಟಿಪ್ಪಣಿ ಸಂಖ್ಯೆ: ಆಇ 730 ವೆಚ್ಚ–8 2018, ದಿನಾಂಕ:30.07.2018 ಹಾಗೂ ಯೋಜನಾ ಇಲಾಖೆಯ ಟಿಪ್ಪಣಿ ಸಂಖ್ಯೆ:ಯೋಇ 09 ಜಶಉ 2018, ದಿನಾಂಕ:23.05.2018 ರಲ್ಲಿ ನೀಡಿರುವ ಸಹಮತದನ್ವಯ ಹಾಗೂ ಆರ್ಥಿಕ ಇಲಾಖೆಯ ಆದೇಶ ಸಂಖ್ಯೆ: ಎಫ್‌ಡಿ 01 ಟಿಎಫ್‌ಪಿ 2019, ದಿನಾಂಕ:03.04.2019ರಲ್ಲಿ ಸರ್ಕಾರದ ಪ್ರಧಾನ ಕಾರ್ಯದರ್ಶಿಯವರಿಗೆ ಪ್ರತ್ಯಾಯೋಜಿಸಿರುವ ಅಧಿಕಾರದನ್ವಯ ಹೊರಡಿಸಿದೆ. ಹೊರಡಿಸಿದೆ.

ಕರ್ನಾಟಕ ರಾಜ್ಯಪಾಲರ ಆಜ್ಞಾನುಸಾರ
ಮತ್ತು ಅವರ ಹೆಸರಿನಲ್ಲಿ

(ಎಸ್.ಆರ್.ಎಸ್.ನಾಧನ್)
ವಿಶೇಷಾಧಿಕಾರಿ ಹಾಗೂ ಪದನಿಮಿತ್ತ
ಸರ್ಕಾರದ ಅಧೀನ ಕಾರ್ಯದರ್ಶಿ(ಯೋಜನೆ)
ಪ್ರಾಥಮಿಕ ಮತ್ತು ಪ್ರೌಢ ಶಿಕ್ಷಣ ಇಲಾಖೆ

ಇವರಿಗೆ:

1. ಮಹಾಲೇಖಪಾಲರು, (ಅಡಿಟ್ 1 & 2) ಕರ್ನಾಟಕ, ಬೆಂಗಳೂರು.
2. ಆಯುಕ್ತರು, ಸಾರ್ವಜನಿಕ ಶಿಕ್ಷಣ ಇಲಾಖೆ, ಬೆಂಗಳೂರು.

...5

3. ನಿರ್ದೇಶಕರು, ಪದವಿ ಪೂರ್ವ ಶಿಕ್ಷಣ ಇಲಾಖೆ, ಮಲ್ಲೇಶ್ವರಂ, ಬೆಂಗಳೂರು.
4. ರಾಜ್ಯ ಯೋಜನಾ ನಿರ್ದೇಶಕರು, ಸಮಗ್ರ ಶಿಕ್ಷಣ ಕರ್ನಾಟಕ, ಬೆಂಗಳೂರು.
5. ನಿರ್ದೇಶಕರು, ರಾಜ್ಯ ಶಿಕ್ಷಣ ಸಂಶೋಧನೆ ಮತ್ತು ತರಬೇತಿ ನಿರ್ದೇಶನಾಲಯ, ಬೆಂಗಳೂರು.
6. ನಿರ್ದೇಶಕರು (ಪ್ರಾಥಮಿಕ/ಪ್ರೌಢ), ಸಾರ್ವಜನಿಕ ಶಿಕ್ಷಣ ಇಲಾಖೆ, ಬೆಂಗಳೂರು.
7. ನಿರ್ದೇಶಕರು, ಖಜಾನಾ ಇಲಾಖೆ, ವಿಶ್ವೇಶ್ವರಯ್ಯ ಮುಖ್ಯ ಗೋಪುರ, ಬೆಂಗಳೂರು.
8. ನಿರ್ದೇಶಕರು, ಪ್ರಾದೇಶಿಕ ಆಂಗ್ಲಭಾಷಾ ತರಬೇತಿ ಸಂಸ್ಥೆ, ದಕ್ಷಿಣ ಭಾರತ, ಜ್ಞಾನಭಾರತಿ ಆವರಣ, ಬೆಂಗಳೂರು.
9. ನಿರ್ದೇಶಕರು, SISLEP, ಧಾರವಾಡ
10. ಅಪರ ಆಯುಕ್ತರು, ಕಲ್ಬುರ್ಗಿ ಮತ್ತು ಬೆಳಗಾವಿ ವಿಭಾಗ, ಸಾರ್ವಜನಿಕ ಶಿಕ್ಷಣ ಇಲಾಖೆ.
11. ಉಪನಿರ್ದೇಶಕರು, ಖಜಾನಾ ಗಣಕ ಕೇಂದ್ರ, ನಂ.49, ಖನಿಜ ಭವನ, ರೇಸ್ಕೋರ್ಸ್ ರಸ್ತೆ, ಬೆಂಗಳೂರು.
12. ಖಜಾನಾಧಿಕಾರಿಗಳು, ರಾಜ್ಯ ಹುಜೂರ್ ಖಜಾನೆ, ಬೆಂಗಳೂರು.
13. ಸರ್ಕಾರದ ಉಪಕಾರ್ಯದರ್ಶಿ–2, ಆರ್ಥಿಕ ಇಲಾಖೆ, ವಿಧಾನ ಸೌಧ, ಬೆಂಗಳೂರು.
14. ಸಾಪ್ತಾಹಿಕ ರಾಜ್ಯ ಪತ್ರ/ಶಾಖಾರಕ್ಷ ಕಡತ/ಹೆಚ್ಚುವರಿ ಪ್ರತಿಗಳು.

ಪ್ರತಿ ಮಾಹಿತಿಗಾಗಿ:

1. ಮಾನ್ಯ ಮುಖ್ಯ ಮಂತ್ರಿಯವರ ಆಪ್ತ ಕಾರ್ಯದರ್ಶಿ, ವಿಧಾನ ಸೌಧ, ಬೆಂಗಳೂರು.
2. ಸರ್ಕಾರದ ಮುಖ್ಯ ಕಾರ್ಯದರ್ಶಿಯವರ ಆಪ್ತ ಕಾರ್ಯದರ್ಶಿಗಳು, ವಿಧಾನ ಸೌಧ, ಬೆಂಗಳೂರು.
3. ಸರ್ಕಾರದ ಪ್ರಧಾನ ಕಾರ್ಯದರ್ಶಿಗಳು, (ಪ್ರಾಥಮಿಕ & ಪ್ರೌಢ ಶಿಕ್ಷಣ) ಶಿಕ್ಷಣ ಇಲಾಖೆ ಬೆಂಗಳೂರು ಇವರ ಆಪ್ತ ಕಾರ್ಯದರ್ಶಿಗಳು.
4. ಸರ್ಕಾರದ ಉಪಕಾರ್ಯದರ್ಶಿ ಹಾಗೂ ಆಂತರಿಕ ಆರ್ಥಿಕ ಸಲಹೆಗಾರರು, ಶಿಕ್ಷಣ ಇಲಾಖೆ, ಬೆಂಗಳೂರು ಇವರ ಆಪ್ತ ಸಹಾಯಕರು.
5. ನಿರ್ದೇಶಕರು, ಜನಶಕ್ತಿ ಮತ್ತು ಉದ್ಯೋಗ ವಿಭಾಗ, ಯೋಜನಾ ಇಲಾಖೆ, ಬಹುಮಹಡಿ ಕಟ್ಟಡ, ಬೆಂಗಳೂರು ಇವರ ಆಪ್ತ ಸಹಾಯಕರು.